# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1380(1608) |
| ಸದಸ್ಯರ ಹೆಸರು | ಶ್ರೀ ಐವನ್ ಡಿಸೋಜಾ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | 19/12/2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೃಷಿ ಇಲಾಖೆಯಿಂದ ಭತ್ತದ ಕೃಷಿಗೆ ಪ್ರೋತ್ಸಾಹಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ; ಪ್ರಸ್ತುತ ಉಭಯ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್ ಭತ್ತ ಬೆಳೆಸಲಾಗುತ್ತಿದೆ; (ವಿವರ ನೀಡುವುದು) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ರೈತರಿಗೆ ರಾಷ್ಟ್ರೀಯ ಆಹಾರ ಮತ್ತು ಪೌಷ್ಠಿಕ ಭದ್ರತೆ (NFSNM) ಅಕ್ಕಿ ಕಾರ್ಯಕ್ರಮದಡಿ ಭತ್ತದ ಕೃಷಿಗೆ ರೂ.9000/ಹೆಕ್ಟೇರ್ ಪ್ರೋತ್ಸಾಹಧನವನ್ನು ನೂತನ ತಾಂತ್ರಿಕತೆಗಳನ್ನು ಅಳವಡಿಸಿಕೊಂಡು ಗುಚ್ಚ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ನೀಡಲಾಗುತ್ತಿದೆ. ಭತ್ತದ ಬೆಳೆಯ ಉತ್ಪಾದನೆಯನ್ನು ಹೆಚ್ಚಿಸಲು ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು ಹಾಗೂ ಜಿಪ್ಸಂ/ಕೃಷಿ ಸುಣ್ಣ ಶೇ.50ರ ಸಹಾಯಧನದಲ್ಲಿ ವಿತರಿಸಲಾಗುತ್ತಿದೆ. 2025-26ನೇ ಸಾಲಿಗೆ NFSNM – ಅಕ್ಕಿ ಕಾರ್ಯಕ್ರಮದಡಿ ಈ ಕೆಳಗಿನಂತೆ ಕಾರ್ಯಕ್ರಮ ನೀಡಲಾಗಿರುತ್ತದೆ.<br><br>ಜಿಲ್ಲೆ — NFSNM-ಅಕ್ಕಿ ಕಾರ್ಯಕ್ರಮ (ರೂ ಲಕ್ಷಗಳಲ್ಲಿ)<br>ದಕ್ಷಿಣ ಕನ್ನಡ — 36.60<br>ಉಡುಪಿ — 50.60<br><br>ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 9,750 ಹೆಕ್ಟೇರ್ ಮತ್ತು ಉಡುಪಿ ಜಿಲ್ಲೆಯಲ್ಲಿ 30,582 ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆ ಬಿತ್ತನೆಯಾಗಿರುತ್ತದೆ. |

| | | |
|---|---|---|
| ಆ) | ಕಬ್ಬು ಬೆಳೆಯನ್ನು ಬೆಳೆಸಲು ಉಭಯ ಜಿಲ್ಲೆಗಳಲ್ಲಿ ಸೂಕ್ತವಾದ ವಾತಾವರಣ ಇದೆಯೇ; ಈ ಬಗ್ಗೆ ರೈತರಿಗೆ ನೀಡಿದ ಸಲಹೆ ಏನು; | <u>ಶಿವಮೊಗ್ಗ, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ</u><br><br>ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಬ್ಬು ಬೆಳೆಯಲು ಮಜಲು ಮತ್ತು ಬೆಟ್ಟು ಗದ್ದೆಗಳಲ್ಲಿ ವಾತಾವರಣವು ತುಂಬಾ ಸೂಕ್ತವಾಗಿದೆ.<br>ಕಬ್ಬು ಬೆಳೆಗೆ ಅನಾನಸು ರೋಗ ಮತ್ತು ಕಾಂಡ ಕೊಳೆ ರೋಗದ ಬಾಧೆ ಇದ್ದು, ಇದನ್ನು ತಪ್ಪಿಸಲು ಸುಧಾರಿತ ಮತ್ತು ರೋಗ ನಿರೋಧಕ ಕಬ್ಬು ತಳಿಗಳಾದ ಅಭಿಮನ್ಯು ಮತ್ತು ವಿಶಾಲ್ತಳಿಗಳನ್ನು ಬೆಳೆಸಲು ರೈತರಿಗೆ ಸಲಹೆ ನೀಡಲಾಗುತ್ತಿದೆ.<br>ಕೃಷಿ ಇಲಾಖೆ ಆಯೋಜಿಸುವ ಕೃಷಿ ಮೇಳ ಮತ್ತು ರೈತ-ವಿಜ್ಞಾನಿಗಳ ಚರ್ಚಾಗೋಷ್ಠಿ ಮತ್ತು ಕ್ಷೇತ್ರಭೇಟಿಗಳಲ್ಲಿ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಮತ್ತು ಕೃಷಿ ವಿಜ್ಞಾನ ಕೇಂದ್ರ, ಬ್ರಹ್ಮಾವರದ ವಿಜ್ಞಾನಿಗಳು ರೈತರಿಗೆ ಮಾಹಿತಿಯನ್ನು ನೀಡುತ್ತಿದ್ದಾರೆ.<br>ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಬ್ಬಿನ ಕಾರ್ಖಾನೆ ಇಲ್ಲದೇ ಇರುವುದರಿಂದ ಬೆಳೆದಂತಹ ಕಬ್ಬು ಸಧ್ಯದ ಮಟ್ಟಿಗೆ ಗಾಣದ ಬೆಲ್ಲಕ್ಕೆ ಮತ್ತು ಕಬ್ಬಿನ ಹಾಲಿಗೆ ಸರಬರಾಜಾಗುತ್ತಿದೆ. ಈ ಜಿಲ್ಲೆಗಳಲ್ಲಿ ಸ್ಥಳೀಯವಾಗಿ ಬೆಳೆದು ತಯಾರಿಸಿದ ಬೆಲ್ಲಕ್ಕೆ ಅತೀವ ಬೇಡಿಕೆ ಇರುತ್ತದೆ. |
| ಇ) | ಕರಾವಳಿ ಜಿಲ್ಲೆಗಳಲ್ಲಿ ಕೃಷಿಗೆ ಉತ್ತೇಜನ ನೀಡಲು ಬೆಳೆಗಳನ್ನು ಸರ್ಕಾರದಿಂದ ಪ್ರೋತ್ಸಾಹಿಸಲಾಗುತ್ತಿದೆಯೇ; ಬೆಳೆಗಾರರಿಗೆ ಕೃಷಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಕರಾವಳಿ ಜಿಲ್ಲೆಗಳಲ್ಲಿ ಸಾಗುವಳಿ ವಿಸ್ತೀರ್ಣ ಹಾಗೂ ಬೆಳೆಗಳ ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಆಹಾರ ಮತ್ತು ಪೌಷ್ಟಿಕ ಭದ್ರತೆ ಯೋಜನೆಯಡಿಯಲ್ಲಿ ಅಕ್ಕಿ, ದ್ವಿದಳಧಾನ್ಯ, TRFA – ದ್ವಿದಳಧಾನ್ಯ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಬಿಯಾನ – ಎಣ್ಣೆಕಾಳು ಬೆಳೆ ಕಾರ್ಯಕ್ರಮಗಳಲ್ಲಿ ಈ ಕೆಳಗಿನ ಘಟಕಗಳನ್ನು ಅನುಷ್ಠಾನ ಮಾಡಲಾಗುತ್ತಿದೆ<br><br>(ಅ) ಪ್ರಾತ್ಯಕ್ಷಿಕೆ ಘಟಕಗಳನ್ನು ವಿವಿಧ ಸುಧಾರಿತ ತಾಂತ್ರಿಕತೆಗಳ ಅಳವಡಿಕೆಯಿಂದ ಅನುಷ್ಠಾನ ಮಾಡಲಾಗುತ್ತಿದೆ.<br><br>(ಆ) ಬಿತ್ತನೆ ಬೀಜ ವಿತರಣೆ ಘಟಕದಡಿ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುತ್ತಿದೆ. |

| | | |
|---|---|---|
| | | (ಇ) ಸಮಗ್ರ ಪೋಷಕಾಂಶ ಮತ್ತು ಸಮಗ್ರ ಪೀಡೆ ನಿರ್ವಹಣೆ: ಕ್ಷೇತ್ರ ಮಟ್ಟದಲ್ಲಿ ಮಣ್ಣಿನ ಫಲವತ್ತತೆಯನ್ನು ಪುನರ್ ಸ್ಥಾಪಿಸಿ ಬೆಳೆಗಳ ಉತ್ಪಾದಕತೆಯನ್ನು ಸ್ಥಿರಗೊಳಿಸಲು ಸಮಗ್ರ ಪೋಷಕಾಂಶ ಮತ್ತು ಸಮಗ್ರ ಪೀಡೆ ನಿರ್ವಹಣೆಗೆ ಜಿಪ್ಸಂ, ಕೃಷಿ ಸುಣ್ಣ, ಲಘುಪೋಶಕಾಂಶ ಮತ್ತು ಸಸ್ಯ ಸಂರಕ್ಷಣಾ ಔಷಧಿಗಳನ್ನು ಶೇ. 50ರಷ್ಟು ಸಹಾಯಧನದಲ್ಲಿ ರೈತರಿಗೆ ವಿತರಿಸಲಾಗುತ್ತಿದೆ.<br><br>(ಈ) ರೈತರಿಗೆ ತಾಂತ್ರಿಕತೆಗಳ ಬಗ್ಗೆ ಅರಿವು ಮೂಡಿಸುವುದು, ಸಹಾಯಧನದಲ್ಲಿ ಪರಿಕರಗಳನ್ನು ವಿತರಿಸುವುದು ಹಾಗೂ ಕ್ಷೇತ್ರೋತ್ಸವಗಳನ್ನು ಹಮ್ಮಿಕೊಂಡು ಇತರೆ ರೈತರಿಗೆ ತಿಳುವಳಿಕೆ ನೀಡುವ ಚಟುವಟಿಕೆಗಳಲ್ಲದೇ ಬೆಳೆ ಪದ್ಧತಿ ಆಧಾರಿತ ತರಬೇತಿಗಳನ್ನು ಸಹ ನೀಡಲಾಗುತ್ತಿದೆ.<br><br>ಊ) ನ್ಯಾನೋ ರಸಗೊಬ್ಬರ ಬಳಕೆ: ಕಳೆದ ಮೂರು ವರ್ಷಗಳಿಂದ ಕೃಷಿ ಇಲಾಖೆಯು ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ ಹಾಗೂ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆಗಳಡಿ ಗುಚ್ಛ ಗ್ರಾಮಗಳಲ್ಲಿ ಪ್ರಾತ್ಯಕ್ಷಿಕೆಗಳ ಮೂಲಕ ರೈತರಿಗೆ ನ್ಯಾನೋ ರಸಗೊಬ್ಬರ ಬಳಕೆ ಬಗ್ಗೆ ಅರಿವು ಮೂಡಿಸಲಾಗಿದೆ.<br><br>ಎ) ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳ ಮುಖಾಂತರ ಕೃಷಿಯಲ್ಲಿ ಆಧುನಿಕ ತಾಂತ್ರಿಕತೆಗಳನ್ನು ಅಳವಡಿಸುವ ಬಗ್ಗೆ ರೈತರಿಗೆ ತರಬೇತಿಗಳನ್ನು ನೀಡುವುದರ ಮೂಲಕ ಆಧುನಿಕ ಮತ್ತು ಸುಲಭವಾದ ಕೃಷಿ ವ್ಯವಸಾಯಕ್ಕಾಗಿ ಮಾರ್ಗದರ್ಶನ ನೀಡಲಾಗುತ್ತಿದೆ.<br><br>ಏ) ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು ಯೋಜನೆಯಡಿ ನೂತನ ತಳಿಗಳ ಅಳವಡಿಕೆಯಿಂದ ಬ್ಲಾಕ್ ಗುಚ್ಛಗಳಲ್ಲಿ ಪ್ರಾತ್ಯಕ್ಷತೆಗಳನ್ನು ನೆಲಗಡಲೆ, ಬೆಳೆಯಲ್ಲಿ ಇಲಾಖೆ ಮುಖಾಂತರ ಅನುಷ್ಠಾನ ಮಾಡಲಾಗುತ್ತಿದೆ. ಸದರಿ ಯೋಜನೆಯಡಿ ರೈತರ ತರಬೇತಿ ಮತ್ತು ರೈತ ಕ್ಷೇತ್ರ ಪಾಠಶಾಲೆಗಳನ್ನು |

| | | |
|---|---|---|
| | | ಆಯೋಜಿಸಿ ನೂತನ ತಂತ್ರಜ್ಞಾನಗಳು, ಸಮಗ್ರ ಪೀಡೆ ನಿರ್ವಹಣೆ, ಸಮಗ್ರ ರೋಗ ನಿರ್ವಹಣೆ, ಸಮಗ್ರ ಪೋಷಕಾಂಶಗಳ ನಿರ್ವಹಣೆ ಇತ್ಯಾದಿಗಳನ್ನು ಒಳಗೊಂಡಂತೆ ಉತ್ತಮ ಕೃಷಿ ಪದ್ಧತಿಗಳ ಬಗ್ಗೆ ತರಬೇತಿ ನೀಡುವುದರ ಮೂಲಕ ಎಣ್ಣೆಕಾಳು ಬೆಳೆಯುವ ರೈತರಿಗೆ ಮಾರ್ಗದರ್ಶನ ನೀಡಲಾಗುತ್ತಿದೆ.<br><br>ಸೂಕ್ತ ಸಮಯದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ ಕೃಷಿ ಯಂತ್ರೋಪಕರಣಗಳನ್ನು, ತುಂತುರು ನೀರಾವರಿ ಹಾಗೂ ಹನಿ ನೀರಾವರಿ ಘಟಕಗಳ ವಿತರಣೆಯನ್ನು ಸಹ ಕೃಷಿ ಯಾಂತ್ರೀಕರಣ ಹಾಗೂ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗಳಡಿ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br><u>ಶಿವಮೊಗ್ಗ, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ</u><br><br>ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭತ್ತದ ಕೃಷಿ ಉತ್ತೇಜಿಸಲು ಈ ಪ್ರದೇಶಕ್ಕೆ ಸೂಕ್ತವಾಗುವ ಮತ್ತು ಹೆಚ್ಚು ಬೇಡಿಕೆಯಿರುವ ಕೆಂಪಕ್ಕಿ ತಳಿಗಳನ್ನು ಸಂಶೋಧಿಸಿ ರೈತರಿಗೆ ಎಂ ಒ - 4 ಭತ್ತದ ತಳಿ ನಂತರ ಸಹ್ಯಾದ್ರಿ ಪಂಚ ಮುಖಿ, ಸಹ್ಯಾದ್ರಿ ಬ್ರಹ್ಮ, ಸಹ್ಯಾದ್ರಿ ಸಪ್ತಮಿ, ಸಹ್ಯಾದ್ರಿ ಕೆಂಪು ಮುಕ್ತಿ ಮತ್ತು ಕಜೆ 25-9 ತಳಿಗಳನ್ನು ಸಂಶೋಧಿಸಿ ಕರಾವಳಿ ಜಿಲ್ಲೆಗಳಿಗೆ ಶಿಫಾರಸ್ಸು ಮಾಡಲಾಗಿದೆ. ಈ ತಳಿಗಳನ್ನು ಜನಪ್ರಿಯಗೊಳಿಸಲು ಕೃಷಿ ವಿಜ್ಞಾನ ಕೇಂದ್ರ, ಬ್ರಹ್ಮಾವರ ಮತ್ತು ಕಂಕನಾಡಿ ದಕ್ಷಿಣ ಕನ್ನಡ ಜಿಲ್ಲೆಯಿಂದ ಇತ್ತೀಚೆಗೆ ಬಿಡುಗಡೆಯಾದ ಸಹ್ಯಾದ್ರಿ ಪಂಚಮುಖಿ, ಸಹ್ಯಾದ್ರಿ ಬ್ರಹ್ಮ, ಸಹ್ಯಾದ್ರಿ ಸಪ್ತಮಿ, ಸಹ್ಯಾದ್ವರಿ ಕೆಂಪುಮುಕ್ತಿ ಮತ್ತು ಕಜೆ 25-9 ಭತ್ತದ ತಳಿಗಳ ಮುಂಚೂಣಿ ಪ್ರಾತ್ಯಕ್ಷಿಕೆಗಳನ್ನು ಹಮ್ಮಿಕೊಂಡು, ರೈತರಿಗೆ ವೈಜ್ಞಾನಿಕ ಮತ್ತು ಲಾಭದಾಯಕವಾಗಿ ಭತ್ತ ಬೆಳೆಯುವ ಪದ್ಧತಿಗಳನ್ನು ಪ್ರಾತ್ಯಕ್ಷಿಕೆಗಳ ಮೂಲಕ ಕೊಡಲಾಗುತ್ತಿದೆ. ಕರಾವಳಿ ಪ್ರದೇಶದಲ್ಲಿ ಹಡಿಲು ಭೂಮಿಯಲ್ಲಿ ಭತ್ತದ |

| | | |
|---|---|---|
| | | ಕೃಷಿಯನ್ನು ಉತ್ತೇಜಿಸಲು ಭತ್ತದ ಯಾಂತ್ರೀಕರಣದ ಮುಖಾಂತರ ರೈತರಿಗೆ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು ನೀಡಿ ತನ್ಮೂಲಕ ಯುವಕರು ಕೃಷಿಯತ್ತ ಮುಖ ಮಾಡಲು ಪ್ರೋತ್ಸಾಹಿಸಲಾಗುತ್ತಿದೆ. ಈ ತರಬೇತಿಯನ್ನು ಪಡೆದ ಯಾಂತ್ರೀಕೃತ ಭತ್ತದ ಬೇಸಾಯದ ಉದ್ಯಮಿಗಳು ಕೃಷಿಯಲ್ಲಿ ತಮ್ಮ ಬದುಕನ್ನು ಕಟ್ಟಿಕೊಳ್ಳುತ್ತಿದ್ದಾರೆ, ಜೊತೆಗೆ ಹಡಿಲು ಭೂಮಿಯನ್ನು ಕೃಷಿ ಮಾಡಿ ಇತರರಿಗೆ ಮಾದರಿಯಾಗಿದ್ದಾರೆ. ಇದಲ್ಲದೇ ಕೃಷಿ ಸಖಿಯರಿಗೂ ಸಹ NRLM ಮುಖಾಂತರ ತರಬೇತಿ ನೀಡಿ ಅವರು ಕೂಡಾ ಹಡಿಲು ಭೂಮಿಯಲ್ಲಿ ಕೃಷಿ ಮಾಡಲು ಮಾಹಿತಿ ಮಾರ್ಗದರ್ಶನಗಳನ್ನು ವಿಶ್ವವಿದ್ಯಾಲಯ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳ ಮುಖಾಂತರ ನೀಡಲಾಗುತ್ತಿದೆ. ಪ್ರಸ್ತುತ ವರ್ಷದಲ್ಲಿ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ಬ್ರಹ್ಮಾವರವು ರೈತರ ಸಹಭಾಗಿತ್ವದಲ್ಲಿ ಬೀಜೋತ್ಪಾದನೆ ಮಾಡಿ ರೈತರ ಅನುಕೂಲಕ್ಕಾಗಿ ಬಿತ್ತನೆ ಬೀಜಗಳನ್ನು ವಿತರಿಸಲಾಗಿದೆ. |

ಸಂಖ್ಯೆ: AGRI/378/ACT/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು